ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು)

1. ಒಬ್ಬರು ಮಾತ್ರ

2. ಕಾರ್ಯಭಾಗದ ಹಿತದೃಷ್ಟಿಯಿಂದ.

ಕುಂದಾಪುರ ಕ್ಷೇತ್ರದ ವ್ಯಾಪ್ತಿಯ ಗ್ರಾಮಪಂಚಾಯಿತಿಯ ವ್ಯಾಪ್ತಿಯ ಗ್ರಾಮಪಂಚಾಯತಿಯ ಕಾರ್ಯದರ್ಶಿಗಳನ್ನು ವರ್ಗಾವಣೆ ಮಾಡಿರುವುದು

709(797) ಶ್ರೀ ಹಹಾಲಾಡಿ ಶ್ರೀನಿವಾಸ ಶೆಟ್ಟಿ (ಕುಂದಾಪುರ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಉಡುಪಿ ಜಿಲ್ಲೆಯ ಕುಂದಾಪುರ ವಿಧಾನಸಭಾ ವ್ಯಾಪ್ತಿಯ ಗ್ರಾಮ ಪಂಚಾಯತ್ ಕಾರ್ಯದರ್ಶಿಗಳನ್ನು ವರ್ಗಾವಣೆ ಅಲ್ಲದ ಸಮಯದಲ್ಲಿ ಆಗಾಗ ಬದಲಾವಣೆ ಮಾಡಲು ಕಾರಣವೇನು?

ಆ) ಯಾವ ಯಾವ ಗ್ರಾಮ ಪಂಚಾಯತ್‌ಗಳಲ್ಲಿ ಹೀಗೆ ಕಾರ್ಯದರ್ಶಿಗಳ ಬದಲಾವಣೆ ವರ್ಷದ ಮಧ್ಯದಲ್ಲಿ ಮಾಡಲಾಗಿದೆ. ಪಂಚಾಯತ್‌ವಾರು ಮಾಹಿತಿ ನೀಡುವುದು.

ಇ) ವರ್ಷದ ಮಧ್ಯದಲಿ ಈ ರೀತಿ ಬದಲಾವಣೆ ಮಾಡಲು ಅವಕಾಶವಿದೆಯೇ? ಆಗಾಗ ಬದಲಾವಣೆ ಮಾಡಿ ನೌಕರರಿಗೆ ತೊಂದರೆ ಕೊಡುತ್ತಿರುವುದು ಸರಿಯೇ?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು)

ಅ) ಕುಂದಾಪುರ ವಿಧಾನ ಸಭಾ ವ್ಯಾಪ್ತಿಯಲ್ಲಿ ಗ್ರಾಮ ಪಂಚಾಯತ್ ಕಾರ್ಯದರ್ಶಿಗಳನ್ನು ವರ್ಷದ ಮಧ್ಯಂತರದಲ್ಲಿ ವರ್ಗಾವಣೆ ಮಾಡಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಜಿಲ್ಲಾ, ತಾಲ್ಲೂಕು, ಗ್ರಾಮ ಪಂಚಾಯತ್‌ಗಳ ಸಭೆಗಳಲ್ಲಿ ಕಾರ್ಯಕಲಾಪಗಳನ್ನು ವೀಕ್ಷಿಸಲು ಸಾರ್ವಜನಿಕ ಗ್ಯಾಲರಿಗಳನ್ನು ನಿರ್ಮಿಸುವುದು.

710 (798) ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ (ಕುಂದಾಪುರ):- ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಿಧಾನಸಭೆಯ ಕಾರ್ಯ ಕಲಾಪಗಳನ್ನು ವೀಕ್ಷಿಸಲು ಸಾರ್ವಜನಿಕ ಗ್ಯಾಲರಿಗಳೂ ಇದ್ದಂತೆ, ಜಿಲ್ಲಾ ಪಂಚಾಯತ್-ತಾಲ್ಲೂಕ್ ಪಂಚಾಯತ್ ಗ್ರಾಮ ಪಂಚಾಯತ್ ಮಾಸಿಕ ಸಭೆ ಹಾಗೂ ವಿಶೇಷ ಸಭೆಗಳ ಕಾರ್ಯಕಲಾಪಗಳನ್ನು ವೀಕ್ಷಿಸಲು ಸಾರ್ವಜನಿಕರಿಗೆ ಅವಕಾಶ ಕಲ್ಪಿಸುವ ಇರಾದೆ ಸರ್ಕಾರಕ್ಕೆ ಇದೆಯೇ?

ಆ) ಇದ್ದಲ್ಲಿ ಯಾವಾಗ ಕಾರ್ಯ ರೂಪಕ್ಕೆ ತರಲಾಗುವುದು?